ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : DATE: 25/6/20

# ಅಧಿವೇಶನ ಮೇಲೆ ಕರೊನಾ ಕಾರ್ಮೋಡ?

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕರೊನಾ ಪ್ರಕರಣ ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಮುಂಗಾರು ಅಧಿವೇಶನ ಮುಂದೂಡಿಕೆಯಾಗುವ ಸಾಧ್ಯತೆಗಳು ದಟ್ಟವಾಗಿವೆ.

ಜುಲೈ 2ನೇ ವಾರ 10 ದಿನ ಮುಂಗಾರು ಅಧಿವೇಶನ ನಡೆಸಲು ಸರ್ಕಾರ ಆಲೋಚನೆ ಮಾಡಿತ್ತು. ಆದರೆ, 15 ದಿನಗಳಿಂದ ಕರೊನಾ ಮಹಾಮಾರಿ ಏರುಗತಿಯಲ್ಲಿ ಸಾಗುತ್ತಿದೆ. ಜತೆಗೆ ಸಾವಿನ ಪ್ರಮಾಣ ಕೂಡ ನಿರೀಕ್ಷೆ ಮೀರಿ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ಮಳೆಗಾಲದ ಅಧಿವೇಶನ ಕುರಿತು ವಿಧಾನ ಮಂಡಲದ ಸಚಿವಾಲಯದ ಅಧಿಕಾರಿಗಳು ಗಂಭೀರವಾಗಿ ಚಿಂತನೆ ನಡೆಸಿದ್ದಾರೆ.

» ಇಂದು ಸ್ಪೀಕರ್, ಸಭಾಪತಿ ಚರ್ಚೆ

ಕಳೆದ ವರ್ಷ ಬೆಳಗಾವಿಯಲ್ಲಿ ನಡೆಯಬೇಕಿದ್ದ



ಮಳೆಗಾಲದ ಅಧಿವೇಶನವನ್ನು ಪ್ರವಾಹ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಯೇ ನಡೆಸಲಾಯಿತು. ಮಾರ್ಚ್‌ನಲ್ಲಿ ನಡೆದ ಬಜೆಟ್ ಅಧಿವೇಶನ ಕೂಡ ಕರೊನಾ ಕಾರಣಕ್ಕಾಗಿ ಮೊಟಕುಗೊಳಿಸಲಾಗಿತ್ತು. ಪ್ರತಿವರ್ಷ ಜನವರಿಯಲ್ಲಿ ಜಂಟಿ ಅಧಿವೇಶನ, ಮಾರ್ಚ್‌ನಲ್ಲಿ ಬಜೆಟ್ ಅಧಿವೇಶನ, ಜೂನ್ ಅಥವಾ ಜುಲೈನಲ್ಲಿ ಮುಂಗಾರು ಅಧಿವೇಶನ ಹಾಗೂ ನವೆಂಬರ್-ಡಿಸೆಂಬರ್‌ನಲ್ಲಿ ಚಳಿಗಾಲದ ಅಧಿವೇಶನ ನಡೆಯುವುದು ಸಂಪ್ರದಾಯವಾಗಿದೆ.

## ಮುಂದೂಡಲು ಶಾಸಕರ ಒತ್ತಾಯ

ಬಿಜೆಪಿ, ಕಾಂಗ್ರೆಸ್, ಜೆಡಿಎಸ್‌ನ ಎಲ್ಲ ಶಾಸಕರೂ ಅಧಿವೇಶನ ಮುಂದೂಡುವಂತೆ ವಿಧಾನಸಭೆಯ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿಗೆ ಮನವಿ ಮಾಡಲಿದ್ದಾರೆ ಎನ್ನಲಾಗಿದೆ. ಖುದ್ದು ಮುಖ್ಯಮಂತ್ರಿಗಳೇ ಅಧಿವೇಶನ ವಿಚಾರವಾಗಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಜತೆ ಚರ್ಚಿಸಿ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮಳೆಗಾಲದ ಅಧಿವೇಶನ ಸೇರಿ ವಿವಿಧ ವಿಷಯಗಳ ಕುರಿತು ಚರ್ಚಿಸಲು ನಾನು ಹಾಗೂ ವಿಧಾನ ಪರಿಷತ್ ಸಭಾಪತಿ ಗುರುವಾರ ಸಭೆ ನಡೆಸಲಿದ್ದೇವೆ. ಆ ಸಭೆಯಲ್ಲಿ ಅಧಿವೇಶನ ನಡೆಸುವ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ.
|ವಿಶ್ವೇಶ್ವರ ಹೆಗಡೆ ಕಾಗೇರಿ ವಿಧಾನಸಭೆ ಸ್ಪೀಕರ್

ಮಾರ್ಚ್‌ನಲ್ಲಿ ಬಜೆಟ್ ಅಧಿವೇಶನ ನಡೆಸಿದ್ದೇವೆ. ಮುಂದಿನ ಅಧಿವೇಶನ ನಡೆಸಲು ಸರ್ಕಾರಕ್ಕೆ ಸೆಪ್ಟೆಂಬರ್ ವರೆಗೆ ಸಮಯವಿದೆ. ಪರಿಸ್ಥಿತಿ ಅವಲೋಕಿಸಿ ತೀರ್ಮಾನ ಕೈಗೊಳ್ಳುತ್ತೇವೆ.
|ಮಾಧುಸ್ವಾಮಿ ಕಾನೂನು ಮತ್ತು ಸಂಸದೀಯ ಸಚಿವ